ಆ) ಒಂದು.

ಇ) ಸದರಿ ಕಾಲೇಜು ಸರ್ಕಾರಿ ಪದವಿಪೂರ್ವ ಕಾಲೇಜು ಕಟ್ಟಡದಲ್ಲಿ ನಡೆಯುತ್ತಿರುವ ಕಾರಣ ಅಲ್ಲಿಯ ಪೀಠೋಪಕರಣಗಳನ್ನು ಉಪಯೋಗಿಸಿಕೊಳ್ಳಲಾಗಿದೆ. ಈ ವರ್ಷ ಡೆಸ್ಕುಗಳನ್ನು ಪೂರೈಸಲು ಕ್ರಮ ಕೈಗೊಳ್ಳಲಾಗುವುದು.

ಈ) ಒದಗಿಸಿಲ್ಲ.

ಉ) ಸದರಿ ಕಾಲೇಜು ಸರ್ಕಾರಿ ಪದವಿಪೂರ್ವ ಕಾಲೇಜು ಕಟ್ಟಡದಲ್ಲಿ ನಡೆಯುತ್ತಿರುವ ಕಾರಣ ಅಲ್ಲಿಯ ಪೀಠೋಪಕರಣಗಳನ್ನು ಉಪಯೋಗಿಸಿಕೊಳ್ಳಲಾಗಿದೆ. ಈ ವರ್ಷ ಡೆಸ್ಕ್‌ಗಳನ್ನು ಪೂರೈಸಲು ಅಗತ್ಯ ಬಿದ್ದಲ್ಲಿ ಕ್ರಮಕೈಗೊಳ್ಳಲಾಗುವುದು.

ಊ) ಆ) ದೈಹಿಕ ಶಿಕ್ಷಕರನ್ನು ಜೂನ್ 30ರೊಳಗೆ ನೇಮಿಸಬೇಕು.

ಆ) ಹೆಚ್ಚಿನ ಕಾರ್ಯಭಾರಕ್ಕನುಗುಣವಾಗಿ ಉಪನ್ಯಾಸಕರನ್ನು ನೇಮಿಸಬೇಕು.

ಇ) ರೂ.15,000 ಮೊತ್ತದ ಪುಸ್ತಕಗಳನ್ನು ಖರೀದಿಸಬೇಕು.

ಈ) ಈ ಕಾಲೇಜಿಗೆ ಸ್ವಂತ ಕಟ್ಟಡವನ್ನು ನಿರ್ಮಿಸಲು ಪ್ರಯತ್ನಿಸಬೇಕು

ಉ) ಈ ಕಾಲೇಜಿಗೆ ರೂ.25,000 ಮೊತ್ತದ ಪೀಠೋರಪಕರಣ ಒದಗಿಸಬೇಕು.

ಋ) ಆ) ದೈಹಿಕ ಶಿಕ್ಷಕರ ನೇಮಕಾತಿ : ಆರ್ಥಿಕ ಮಿತವ್ಯಯ ಸಡಿಲಗೊಳಿಸಿದ ನಂಕರ ಕ್ರಮ ಕೈಗೊಳ್ಳಲಾಗುವುದು.

ಆ) ಉಪಾನ್ಯಸಕರ ನೇಮಕ : ಹಾಲಿ ಉಪನ್ಯಾಸಕರಿದ್ದಾರೆ. ಹೆಚ್ಚಿನ ಉಪನ್ಯಾಸಕರಿಗಾಗಿ ಪ್ರಸ್ತಾಪನೆ ಬಂದ ಕೂಡಲೇ ಕ್ರಮ ಕೈಗೊಳ್ಳಲಾಗುವುದು.

ಇ) ಪುಸ್ತಕಗಳ ಪೂರೈಕೆ : ಈ ವರ್ಷ ಪೂರೈಸಲು ಕ್ರಮ ಕೈಗೊಳ್ಳಲಾಗುವುದು.

ಈ) ಕಾಲೇಜು ಕಟ್ಟಡ ನಿರ್ಮಾಣ: ಈ ವರ್ಷದಲ್ಲಿ ಕಟ್ಟಡಕ್ಕೆಂದು 13.50 ಲಕ್ಷ ರೂಪಾಯಿಗಳನ್ನು ಯೋಜನಾ ಆಯವ್ಯಯದಲ್ಲಿ ಒದಗಿಸಿದೆ. ಈ ವರ್ಷದಲ್ಲಿಯೇ ಕಟ್ಟಡ ನಿರ್ಮಾಣ ಪ್ರಾರಂಭಿಸಲು ಕ್ರಮ ತಗೆದುಕೊಳ್ಳಲಾಗುವುದು.

ಉ) ಪೀಠೋಪಕರಣ : ಈ ವರ್ಷ ಅಗತ್ಯ ಬಿದ್ದಲ್ಲಿ ಒದಗಿಸಲು ಕ್ರಮ ತೆಗೆದುಕೊಳ್ಳಲಾಗುವುದು.

ಋ) 3 ಹುದ್ದೆಗಳು.

ಎ) ಆರ್ಥಿಕ ಮಿತವ್ಯಯದ ಕಾರಣ ಭೋದಕೇತರ ಹುದ್ದೆಗಳನ್ನು ಭರ್ತಿ ಮಾಡಲು ಸಾಧ್ಯವಾಗಿರುವುದಿಲ್ಲ. ಆರ್ಥಿಕ ಮಿತವ್ಯಯ ಸಡಲಿಸಿದ ನಂತರ ಕ್ರಮ ತೆಗೆದುಕೊಳ್ಳಲಾಗುವುದು.

ಚಾಮರಾಜನಗರದಲ್ಲಿರುವ ರಾಜ್ಯ ರಸ್ತೆ ಸಾರಿಗೆ ಬಸ್ ನಿಲ್ದಾಣವನ್ನು ಆಧುನಿಕರಣ ಗೊಳಿಸುವುದು

2273 - ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಚಾಮರಾಜನಗರದಲ್ಲಿರುವ ರಾಜ್ಯ ಸಾರಿಗೆ ಬಸ್ ನಿಲ್ದಾಣದ ಆವರಣದಲ್ಲಿ ನೈರ್ಮಲ್ಯ . ಹದಗೆಟ್ಟಿರುವುದು ಬಸ್ ನಿಲ್ದಾಣದ ನಿರ್ವಹಣೆ ಸರಿಯಿಲ್ಲದ ಕಾರಣ ಪ್ರಯಾಣಿಕರಿಗೆ ಸರಿಯಾದ ಅಗತ್ಯ ಸೌಲಭ್ಯಗಳಿಲ್ಲದೆ (ಉದಾ : ಕುಡಿಯುವ ನೀರು, ಶೌಚಾಲಯ, ಪ್ರಯಾಣಿಕರಿಗೆ ಕುಳಿತುಕೊಳ್ಳಲು ಸರಿಯಾದ ಆಸನದ ವ್ಯವಸ್ಥೆ ಇತ್ಯಾದಿ) ಪ್ರಯಾಣಿಕರು ತೊಂದರೆಗೊಳಗಾಗಿರುವ ವಿಚಾರ ಸರ್ಕಾರಕ್ಕೆ ತಿಳಿದಿದೆಯೇ?

2) ಈ ಬಸ್ ನಿಲ್ದಾಣದ ನಿರ್ವಹಣೆಗಾಗಿ ಸರ್ಕಾರ ಹಣವನ್ನೇನಾದರೂ ಖರ್ಚು ಮಾಡುತ್ತಿದೆಯೇ?

3) ಹಾಗಿದ್ದಲ್ಲಿ ಇದಕ್ಕಾಗಿ ಕಳೆದ 3 ವರ್ಷಗಳಿಂದ ಖರ್ಚು ಮಾಡಿರುವ ಹಣದ ಮೊತ್ತವೆಷ್ಟು?

4) ಚಾಮರಾಜನಗರವು ಗಡಿ ಪ್ರದೇಶವಾಗಿದ್ದು ನಮ್ಮ ರಾಜ್ಯ ಪ್ರಯಾಣಿಕರ ಸಂಖ್ಯೆಯು ದಿನೇ ದಿನೇ ಹೆಚ್ಚುತ್ತಿರುವುದರಿಂದ ಸರ್ಕಾರವು ಈಗಿನ ಬಸ್ ನಿಲ್ದಾಣವನ್ನು ಆಧುನೀಕರಣಗೊಳಿಸಿ ಪ್ರಯಾಣಿಕರಿಗೆ ಹೆಚ್ಚಿನ ಸೌಲಭ್ಯಗಳನ್ನು ಒದಗಿಸಿಕೊಡಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ?

ಶ್ರೀ ಅಜೀಜ್ ಸೇಠ್ (ಸಾರಿಗೆ ಸಚಿವರು) :

1) ಹೌದು.

ಕುಡಿಯುವ ನೀರು ಮತ್ತು ಶೌಚಾಲಯಗಳಿಗೆ ನೀರು ಸರಬರಾಜನ್ನು ಉತ್ತಮಪಡಿಸಲು ಪ್ರಯತ್ನ ಮಾಡಲಾಗುತ್ತಿದೆ. ಈಗ ಇರತಕ್ಕ ಅಂತರ್ ಜಲ ಬತ್ತಿರುತ್ತದೆ. ಸಾಕಷ್ಟು ನೀರು ಸರಬರಾಜು ಮಾಡಲು ನಗರ ಪುರಸಬೆಯನ್ನು ಕೋರಲಾಗಿದೆ. ಹೆಂಗಸರಿಗೆ ಮತ್ತು ಗಂಡಸರಿಗೆ ಪ್ರತ್ಯೇಕ ಶೌಚಾಲಯವನ್ನು ಒದಗಿಸಲಾಗದೆ.

2) ಹೌದು

3) ರೂ.86,000-00.

4) ಅವಶ್ಯಕತೆಗೆ ಅನುಗುಣವಾಗಿ ಕ್ರಮ ಕೈಗೊಳ್ಳುವುದು.

ಸಾಲ ಮನ್ನಾ ಯೋಜನೆಯಡಿಯಲ್ಲಿ ಕೇಂದ್ರದಿಂದ ಬಂದ ಹಣ

2191 - ಶ್ರೀ ವೆಂಕಟಪ್ಪ (ಮುಳಬಾಗಿಲು) : ಮಾನ್ಯ ಸಹಕಾರ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಾಲ ಮನ್ನಾ ಯೋಜನೆಯನ್ವಯ ಕೇಂದ್ರ ಸರ್ಕಾರದಿಂದ ರಾಜ್ಯ ಸರಕಾರಕ್ಕೆ ಬಂದಿರುವ ಹಣ ಎಷ್ಟು?

ಆ) ಈ ಯೋಜನೆಯಿಂದ ರಾಜ್ಯದಲ್ಲಿ ಇದುವರೆಗೂ ಪ್ರಯೋಜನ ಪಡೆದಿರುವ ಸಂಖ್ಯೆ ಎಷ್ಟು?

ಶ್ರೀ ಎಸ್.ಆರ್. ಮೋರೆ (ಸಹಕಾರ ರಾಜ್ಯ ಸಚಿವರು) :

ಅ) ರೂ. 92.66 ಕೋಟಿ

ಆ) ರೂ. 4,77,745.

ದ. ಕನ್ನಡ ಜಿಲ್ಲೆಯಲ್ಲಿ ಸಾರ್ವಜನಿಕ ಗ್ರಂಥಾಲಯ ಸೌಲಭ್ಯ

2446 - ಶ್ರೀ ಬಸವರಾಜ (ಬ್ರಹ್ಮಾವರ) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯು ಸಂಪೂರ್ಣ ಸಾಕ್ಷರತಾ ಜಿಲ್ಲೆಯಾಗಿ ಮಾರ್ಪಟ್ಟಿರುವುದು ನಿಜವಲ್ಲವೆ? ಸಾರ್ವಜನಿಕರ ಜ್ಞಾನವನ್ನು ಅಭಿವೃದ್ಧಿಪಡಿಸಲು ಸಾರ್ವಜನಿಕ ಗ್ರಂಥಾಲಯ ಇಲಖೆಯಿಂದ ಎಲ್ಲೆಲ್ಲಿ ಅಂತಹ ಸೌಲಭ್ಯಗಳನ್ನು ಒದಗಿಸಿದೆ, (ಹೆಸರುಗಳೊಂದಿಗೆ ವಿವರಗಳನ್ನೊದಗಿಸುವುದು)

ಆ) ಉಡುಪಿ ತಾಲ್ಲೂಕು ಬ್ರಹ್ಮಾವರ ವಿಧಾನ ಸಭಾ ಕ್ಷೇತ್ರದ ಎಲ್ಲಾ ಮಂಡಲ ಕೇಂದ್ರಗಳಲ್ಲಿ ಕಟ್ಟಡದ ಅನುಕೂಲತೆಯನ್ನು ಕಲ್ಪಿಸಿ ಗ್ರಂಥಾಲಯ ಶಾಖೆಯನ್ನು ಸಾರ್ವಜನಿಕರಿಗೆ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸಿಕೊಡಲು ಸರ್ಕಾರದವರು ಕ್ರಮ ಕೈಗೊಳ್ಳುವರೆ?